ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆ ಕೈಗೊಳ್ಳಲು ರಚಿಸಿರುವ ರಾಜ್ಯ & ಜಿಲ್ಲಾ ಮಟ್ಟದ ಸಮೀಕ್ಷಾ ಸಮಿತಿಗೆ ಸದಸ್ಯರನ್ನು ನೇಮಕ ಮಾಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಸಕಇ 19 ಎಸ್‌ಡಿಸಿ 2021, ದಿನಾಂಕ: 05.02.2021.
2. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ ಇವರ ಪತ್ರ ಸಂಖ್ಯೆ: ಕರಾಸಕಆ/ಎಸ್-9/ಪ್ರಸ್ತಾವನೆ/ ಸಿಆರ್-01/ 2020-21, ದಿನಾಂಕ:05-02-2021.

**ಪ್ರಸ್ತಾವನೆ:**

ಮೇಲೆ ಕ್ರಮಾಂಕ (1) ರಲ್ಲಿ ಸರ್ಕಾರದ ಆದೇಶದಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕಾಯ್ದೆ 2013ರ ನಿಯಮದ ಅಧ್ಯಾಯ 1(2)(ಸಿ)ರನ್ವಯ ಜಿಲ್ಲಾ ಮಟ್ಟದ ಸಮೀಕ್ಷಾ ಸಮಿತಿ ಮತ್ತು 1(2)(ಎಂ)ರನ್ವಯ ರಾಜ್ಯಮಟ್ಟದ ಸಮೀಕ್ಷಾ ಸಮಿತಿಗಳನ್ನು ರಚಿಸಿ ಆದೇಶಿಸಲಾಗಿದೆ.

ಮೇಲೆ ಕ್ರಮಾಂಕ (3) ರಲ್ಲಿ ಓದಲಾದ ಪತ್ರದಲ್ಲಿ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ ಇವರು ರಾಜ್ಯ ಮಟ್ಟದ ಸಮೀಕ್ಷಾ ಸಮಿತಿಗಳ ಸದಸ್ಯರನ್ನು ನೇಮಕ ಮಾಡುವ ಸಂಬಂಧ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಮತ್ತು ಸಫಾಯಿ ಕರ್ಮಚಾರಿಗಳ ಕಲ್ಯಾಣಕ್ಕಾಗಿ ಕಾರ್ಯನಿರ್ವಹಿಸುವ ಸರ್ಕಾರೇತರ ಸಂಸ್ಥೆಗಳಿಂದ ಇಬ್ಬರು ಪ್ರತಿನಿಧಿಗಳನ್ನು ಸದಸ್ಯರನ್ನಾಗಿ ನಾಮ ನಿರ್ದೇಶನ ಮಾಡಲು ಮತ್ತು ಗರಿಷ್ಠ ಇಬ್ಬರು ಸಮುದಾಯದ ಪ್ರತಿನಿಧಿಗಳು ಇವರಲ್ಲಿ ಒಬ್ಬರು ಮಹಿಳೆಯಾಗಿದ್ದು, ಸರ್ಕಾರದಿಂದ ನಾಮ ನಿರ್ದೇಶನ ಮಾಡಿ ಆದೇಶಿಸಲು ಕೋರಿರುತ್ತಾರೆ.

ಮೇಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 19 ಎಸ್‌ಡಿಸಿ 2021 (P-1), ಬೆಂಗಳೂರು, ದಿನಾಂಕ:22-02-2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯ ಮಟ್ಟದ ಸಮೀಕ್ಷಾ ಸಮಿತಿಗೆ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಮತ್ತು ಸಫಾಯಿ ಕರ್ಮಚಾರಿಗಳ ಕಲ್ಯಾಣಕ್ಕಾಗಿ ಕಾರ್ಯನಿರ್ವಹಿಸುವ ಸರ್ಕಾರೇತರ ಸಂಸ್ಥೆಗಳ ಈ ಕೆಳಕಂಡ ಪ್ರತಿನಿಧಿಗಳನ್ನು ಸರ್ಕಾರದಿಂದ ನಾಮ ನಿರ್ದೇಶನ ಮಾಡಿ ಆದೇಶಿಸಿದೆ.

| ಕ್ರ.ಸಂ | ವಿವರ | ಸದಸ್ಯರ ಹೆಸರು |
|---|---|---|
| 1 | ಮ್ಯಾನುಯಲ್ ಸ್ಕ್ಯಾವೆಂಜರ್ಸ್ ಮತ್ತು ಸಫಾಯಿ ಕರ್ಮಚಾರಿಗಳ ಕಲ್ಯಾಣಕ್ಕಾಗಿ ಕಾರ್ಯನಿರ್ವಹಿಸುವ ಸರ್ಕಾರೇತರ ಸಂಸ್ಥೆಗಳಿಂದ, ರಾಜ್ಯ ಸರ್ಕಾರದ ಮೂಲಕ ನಾಮನಿರ್ದೇಶನಗೊಂಡ ಗರಿಷ್ಠ ಇಬ್ಬರು ಪ್ರತಿನಿಧಿಗಳು | 1. ಡಾ.ಕೆ.ಬಿ. ಒಬಳೇಶ, ಸಂಸ್ಥಾಪಕ ಕಾರ್ಯದರ್ಶಿ, ತಮಟೆ ಸೆಂಟರ್ ಫಾರ್ ರೂರಲ್ ಎಂಪವರ್‌ಮೆಂಟ್.<br>2. ಶ್ರೀಮತಿ ಪುಷ್ಪಲತಾ, ಸಫಾಯಿ ಕರ್ಮಚಾರಿ ಆಂದೋಲನ, ರಾಜ್ಯ ಸಂಚಾಲಕರು, |

--2

| | | |
|---|---|---|
| 2 | ಗರಿಷ್ಠ ಇಬ್ಬರು ಸಮುದಾಯ ಪ್ರತಿನಿಧಿಗಳು, ಇವರಲ್ಲಿ ಒಬ್ಬರು ಮಹಿಳೆಯಾಗಿದ್ದು ಸರಕಾರದಿಂದ ನಾಮನಿರ್ದೇಶನಗೊಂಡಿರಬೇಕು | 1. ಶ್ರೀ ಬಾಬಣ್ಣ ಡಿ.ಎಸ್. ಕಾರ್ಯದರ್ಶಿ, Action Initiative Development, (AID).<br>2. ಎಂ. ಪದ್ಮ, ಸಂಚಾಲಕರು, ಸಫಾಯಿ ಕರ್ಮಚಾರಿ ಕಾವಲು ಸಮಿತಿ. |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

22/2/2021

(ಪಿ.ಎನ್. ನಾಗರಾಜ್)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು, (ಲೆಕ್ಕಪತ್ರ & ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.
5. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಆಯೋಗ, ಬೆಂಗಳೂರು.
6. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
7. ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.
8. ಸಮಿತಿಯ ಸದಸ್ಯರುಗಳಿಗೆ (ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಆಯೋಗ, ಬೆಂಗಳೂರು ಇವರ ಮೂಲಕ)
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ:-

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಯವರು ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ.
3. ಸರ್ಕಾರದ ಉಪ ಕಾರ್ಯದರ್ಶಿ-1, ಇವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ

******